**ದಿನಾಂಕ 19.09.2025 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.**

**ಮುಖ್ಯ ವಿಚಾರಣೆಃ ಅರ್ಜಿದಾರರ ಪರ ಮಾನ್ಯ ವಕೀಲರಿಂದ.**

ನನ್ನ ಮುಖ್ಯ ವಿಚಾರಣಾ ಸಾಕ್ಷ್ಯವನ್ನು ಪ್ರಮಾಣ ಪತ್ರದ ರೂಪದಲ್ಲಿ ಸಲ್ಲಿಸಿದ್ದೇನೆ. ಅದರಲ್ಲಿರುವ ವಿಚಾರಗಳನ್ನು ನಾನೇ ಹೇಳಿ ಬರೆಯಿಸಿ ರುಜು ಮಾಡಿದ್ದು ಅದರಲ್ಲಿರುವ ವಿಚಾರಗಳು ಸತ್ಯವಾಗಿವೆ.

**ಪಾಟೀ ಸವಾಲುಃ 2ನೇ ಎದುರುದಾರರ ಪರ ಮಾನ್ಯ ವಕೀಲರಿಂದ.**

ಆ ದಿನ ನಾನು ಹೋಗುತ್ತಿದ್ದ ಬೈಕು ಜಾನ್ಸನ್ ರವರ ತಂದೆಗೆ ಸೇರಿದ್ದು. ಅಪಘಾತವಾದ ಸಮಯದಲ್ಲಿ ನಾನು ಅಪ್ರಾಪ್ತ ವಯಸ್ಕನಾಗಿದ್ದೆ ಎಂದರೆ ಸರಿ. ನನಗೆ ಚಾಲನಾ ಪರವಾನಗಿ ಇರಲಿಲ್ಲ ಎಂದರೆ ಸರಿ. ಸಾಕ್ಷಿಯು ಮುಂದುವರೆದು ನಾನು ಚಾಲನೆ ಮಾಡುತ್ತಿರಲಿಲ್ಲ ಎಂದು ನುಡಿಯುತ್ತಾರೆ. ನ್ಯಾಯಾಲಯಕ್ಕೆ ಹಾಜರುಪಡಿಸಿರುವ ದಾಖಲಾತಿಗಳ ಬಗ್ಗೆ ನನಗೆ ಮಾಹಿತಿ ಇದೆ. ನಾನು ಹೋಗುತ್ತಿದ್ದ ಬೈಕಿನ ಮಾಲೀಕರ ವಿರುದ್ದ ಅಂತಿಮ ವರದಿ ಸಲ್ಲಿಸಿರುತ್ತಾರೆ ಎಂದರೆ ಆ ಬಗ್ಗೆ ನನಗೆ ಗೊತ್ತಿಲ್ಲ. ನಾನು ಹೋಗುತ್ತಿದ್ದ ಬೈಕಿಗೆ ವಿಮೆ ಇರಲಿಲ್ಲ ಎಂದರೆ ಅದರ ಬಗ್ಗೆ ನನಗೆ ಗೊತ್ತಿಲ್ಲ. ಜಾನ್ಸನ್ ಗೆ ಚಾಲನಾ ಪರವಾನಗಿ ಇರಲಿಲ್ಲ ಎಂದರೆ ಸರಿಯಲ್ಲ. ಸದರಿ ದಾಖಲಾತಿಯನ್ನು ಹಾಜರುಪಡಿಸಲು ತೊಂದರೆ ಇಲ್ಲ. ಆಪಾದಿತ ಕಾರಿಗೆ ನಾವೇ ಡಿಕ್ಕಿಪಡಿಸಿರುತ್ತೇವೆ ಎಂದರೆ ಸರಿಯಲ್ಲ. ನಾನು ಹೋಗುತ್ತಿದ್ದ ಬೈಕಿಗೆ ವಿಮೆ ಇಲ್ಲದ ಕಾರಣ ಮತ್ತು ಅದರ ಚಾಲಕನಿಗೆ ಪರವಾನಗಿ ಇಲ್ಲದ ಕಾರಣ ಆಪಾದಿತ ಕಾರಿನ ವಿರುದ್ದ ಸುಳ್ಳು ದೂರು ನೀಡಿರುತ್ತೇವೆ ಎಂದರೆ ಸರಿಯಲ್ಲ. ಪೊಲೀಸರು ನನ್ನಿಂದ ಹೇಳಿಕೆ ಪಡೆದುಕೊಂಡಿರುತ್ತಾರೆ. ಸದರಿ ದಾಖಲಾತಿಯನ್ನು ಹಾಜರುಪಡಿಸಲು ತೊಂದರೆ ಇಲ್ಲ ಎಂದರೆ ಸರಿ. ಅಂತಿಮ ವರದಿಯಲ್ಲಿ ಆರೋಪಿಯನ್ನಾಗಿ ಮಾಡಿರುವ ಮತ್ತೊಂದು ವಾಹನಕ್ಕೆ ಸಂಬಂಧಪಟ್ಟವರನ್ನು ಉದ್ದೇಶಪೂರ್ವಕವಾಗಿ ಪ್ರಸ್ತುತ ಅರ್ಜಿಯಲ್ಲಿ ಪಕ್ಷಗಾರರನ್ನಾಗಿ ಮಾಡಿಲ್ಲ ಎಂದರೆ ಸರಿಯಲ್ಲ.

ಅಪಘಾತವಾದ ನಂತರ ಸಂಜಯ್ ಗಾಂಧಿ ಆಸ್ಪತ್ರೆಗೆ ಹೋಗಿರುತ್ತೇವೆ. ಅಲ್ಲಿಯೇ ಸಂಪೂರ್ಣವಾಗಿ ಚಿಕಿತ್ಸೆ ಪಡೆದಿರುತ್ತೇನೆ. ಆ ಬಗ್ಗೆ ದಾಖಲಾತಿಯನ್ನು ಹಾಜರುಪಡಿಸಲು ತೊಂದರೆ ಇಲ್ಲ. ಮೆಡಿಕಲ್ ಬಿಲ್ಲುಗಳು ನೆರಳಚ್ಚು ಪ್ರತಿ ಎಂದರೆ ಸರಿ. ಅವುಗಳನ್ನು ಈ ಕೇಸಿಗಾಗಿ ಸೃಷ್ಟಿಸಿ ಹಾಜರುಪಡಿಸಿರುತ್ತೇವೆ ಎಂದರೆ ಸರಿಯಲ್ಲ.

ಅಪಘಾತವಾದ ಸಮಯದಲ್ಲಿ ಬಿಬಿಎ ಪ್ರಥಮ ವರ್ಷದಲ್ಲಿ ವ್ಯಾಸಂಗ ಮಾಡುತ್ತಿದ್ದೆ. ಆ ಬಗ್ಗೆ ದಾಖಲಾತಿಯನ್ನು ಹಾಜರುಪಡಿಸಿಲ್ಲ ಮತ್ತು ಹಾಜರುಪಡಿಸಲು ತೊಂದರೆ ಇಲ್ಲ. ಅಪಘಾತದಲ್ಲಿ ನನಗೆ ಸಣ್ಣಪುಟ್ಟ ಗಾಯಗಳು ಆಗಿದ್ದು, ತೀವ್ರ ಸ್ವರೂಪದ ಗಾಯಗಳು ಆಗಿಲ್ಲ ಎಂದರೆ ಸರಿಯಲ್ಲ. ಚಿಕಿತ್ಸೆಗೆ ನಾನು ಹೇಳಿರುವಷ್ಟು ಹಣವನ್ನು ಖರ್ಚು ಮಾಡಿಲ್ಲ ಎಂದರೆ ಸರಿಯಲ್ಲ. ಬೈಕು ಚಾಲಕನ ತಪ್ಪಿ ನಿಂದ ಅಪಘಾತವಾಗಿರುವ ಕಾರಣ ಎದುರುದಾರರು ಪರಿಹಾರ ಪಾವತಿಸಲು ಬಾಧ್ಯಸ್ಥರಲ್ಲ ಎಂದರೆ ಸರಿಯಲ್ಲ.

1 ಮತ್ತು 3ನೇ ಎದುರುದಾರರು ಗೈರು ಹಾಜರಾದ ಕಾರಣ ಪಾಟೀ ಸವಾಲನ್ನು ಮುಂದೂಡಲಾಯಿತು.

**(ನನ್ನ ಉಕ್ತಲೇಖನದಂತೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಿಸಲ್ಪಟ್ಟಿದೆ).**
**(ಓ.ಹೇ.ಕೇ.ಸ.ಇ.)**

**1ನೇ ಎಸ್‌ಸಿಜೆ ಮತ್ತು ಎಸಿಜೆಎಮ್**

**ಬೆಂಗಳೂರು**